ಭದ್ರತೆಯನ್ನು ನೀಡುವುದಕ್ಕೆ ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಅನುಷಂಗಿಕವಾದ ವಿಷಯಗಳಿಗೆ ಉಪಬಂಧ ಕಲ್ಪಿಸುವುದಕ್ಕಾಗಿ ಸರ್ಕಾರವು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012ನ್ನು ಜಾರಿಗೊಳಿಸಿರುತ್ತದೆ.

ಸರ್ವೋಚ್ಚ ನ್ಯಾಯಾಲಯದ ಸಂವಿಧಾನ ಪೀಠವು ದಿನಾಂಕ: 10/04/2006 ರಂದು ನೀಡಿದ ಮೇಲ್ಕಂಡ ತೀರ್ಪಿನನ್ವಯ ದಿನಗೂಲಿ ನೌಕರರ ಸೇವೆಯನ್ನು ಸಕ್ರಮಗೊಳಿಸಲು ಅವಕಾಶವಿರುವುದಿಲ್ಲ.

ಇ) ಇಲ್ಲ

ಪೊಲೀಸ್ ಠಾಣೆ ಮಂಜೂರು ಮಾಡುವುದು

1172 (1181); ಶ್ರೀ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ)

(ಅ) ಚಿಂತಾಮಣಿ ನಗರ ಪೊಲೀಸ್ ಠಾಣೆಯಲ್ಲಿರುವ ರಕ್ಷಕ್ ವಾಹನವು ತುಂಬಾ ಹಳೆಯದಾಗಿದ್ದು ಉಪಯೋಗಿಸಲು ಯೋಗ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಹೊಸ ವಾಹನವನ್ನು ಒದಗಿಸಲಾಗುವುದು;

(ಇ) ಚಿಂತಾಮಣಿ ನಗರದಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿರುವ ಕಾರಣ ಈಗಾಗಲೇ ನಗರದಲ್ಲಿ ಸಂಚಾರಿ ಪೊಲೀಸ್ ಠಾಣೆಯನ್ನು ಸ್ಥಾಪನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸಂಚಾರಿ ಪೊಲೀಸ್ ಠಾಣೆಯನ್ನು ಮಂಜೂರು ಮಾಡಲಾಗುವುದು (ವಿವರ ನೀಡುವುದು)?

ಶ್ರೀ ಕೆ.ಜೆ. ಜಾರ್ಜ್ (ಗೃಹ ಸಚಿವರು)

(ಅ) ಹೌದು.

ರಕ್ಷಕ್ ವಾಹನದ ಬದಲಿಗೆ ಕೆಎ–07–ಜಿ–158 ಕಮಾಂಡರ್ ಜೀಪ್‌ನ್ನು ಒದಗಿಸಲಾಗಿದೆ.

(ಆ) ಅನ್ವಯಿಸುವುದಿಲ್ಲ.

(ಇ) ಇಲ್ಲ.

(ಈ) ಚಿಂತಾಮಣಿ ನಗರದಲ್ಲಿ ಸಂಚಾರ ಪೊಲೀಸ್ ಠಾಣೆಯನ್ನು ತೆರೆಯುವ ಕುರಿತು ಇಲಾಖಾ ಹಂತದಲ್ಲಿ ಪರಿಶೀಲನೆಯಲ್ಲಿದ್ದು, ಅವಶ್ಯಕತೆ ಕಂಡು ಬಂದಲ್ಲಿ ಕ್ರಮ ಕೈಗೊಳ್ಳಲಾಗುವುದು.

ಖಾಲಿ ಇರುವ ಹುದ್ದೆಗಳನ್ನು ಮಂಜೂರು ಮಾಡುವುದು

1173 (1182); ಶ್ರೀ ಕೃಷ್ಣಾರೆಡ್ಡಿ ಎಂ.

ಅ) ಚಿಂತಾಮಣಿ ತಾಲ್ಲೂಕಿನ ಎಲ್ಲಾ ಇಲಾಖೆಗಳಿಗೆ ಮಂಜೂರಾಗಿರುವ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು (ವೃಂದವಾರು ವಿವರ ನೀಡುವುದು);

ಆ) ಈ ಇಲಾಖೆಗಳಲ್ಲಿ ಖಾಲಿ ಇರುವ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗಗಳ ಸಂಖ್ಯೆ ಎಷ್ಟು (ವೃಂದವಾರು ವಿವರ ನೀಡುವುದು);

ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಈ) ರಾಜ್ಯದ ಎಲ್ಲಾ ಇಲಾಖೆಗಳಿಗೆ ಮಂಜೂರಾಗಿರುವ ಹುದ್ದೆಗಳು ರಾಜ್ಯದ ಜನಸಂಖ್ಯೆಗನುಗುಣವಾಗಿ ಇವೆಯೇ;

ಉ) ಹಾಗಿದ್ದಲ್ಲಿ, ರಾಜ್ಯದ ಜನಸಂಖ್ಯೆಗನುಗುಣವಾಗಿ ಖಾಲಿ ಇರುವ ಹುದ್ದೆಗಳು ಹಾಗೂ ಮಂಜೂರು ಮಾಡಬೇಕಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಪೂರ್ಣ ಮಾಹಿತಿ ನೀಡುವುದು)?